ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015-16 ದಿನಾಂಕ: 10-7-2015

## ಪತ್ರಿಕಾ ಪ್ರಕಟಣೆ

# ಬೆಂಗಳೂರಿನಲ್ಲಿ ವಿಧಾನ ಮಂಡಲದ ಅಧಿವೇಶನ

ಬೆಂಗಳೂರು,ಜುಲೈ 10 (ಕರ್ನಾಟಕ ವಾರ್ತೆ) :

ರಾಜ್ಯ ವಿಧಾನ ಅಧಿವೇಶನವು 13ನೇ ಜುಲೈ 2015 ರ ಸೋಮವಾರ ಬೆಂಗಳೂರಿನ ವಿಧಾನಸೌಧದಲ್ಲಿರುವ ವಿಧಾನ ಸಭೆ ಮತ್ತು ವಿಧಾನ ಪರಿಷತ್ ಸಭಾಂಗಣಗಳಲ್ಲಿ ಸಮಾವೇಶಗೊಳ್ಳಲಿದೆ.

ಜು.13- ಸರ್ಕಾರಿ ಕಾರ್ಯಕಲಾಪ, ಜು.14- ಸರ್ಕಾರಿ ಕಾರ್ಯಕಲಾಪ, ಜು.15- ಸರ್ಕಾರಿ ಕಾರ್ಯಕಲಾಪ, ಜು.16- ಸರ್ಕಾರಿ/ಖಾಸಗಿ ಕಾರ್ಯಕಲಾಪ, ಜು.17- ಸರ್ಕಾರಿ ಕಾರ್ಯಕಲಾಪ, ಜು.18- ಸಾರ್ವತ್ರಿಕ ರಜಾದಿನ, ಜು.19- ಸಾರ್ವತ್ರಿಕ ರಜಾದಿನ, ಜು.20- ಸರ್ಕಾರಿ ಕಾರ್ಯಕಲಾಪ, ಜು.21- ಸರ್ಕಾರಿ ಕಾರ್ಯಕಲಾಪ, ಜು.22- ಸರ್ಕಾರಿ ಕಾರ್ಯಕಲಾಪ, ಜು.23- ಸರ್ಕಾರಿ/ಖಾಸಗಿ ಕಾರ್ಯಕಲಾಪ, ಜು.24- ಸರ್ಕಾರಿ ಕಾರ್ಯಕಲಾಪ.

**ಬಾಬು/ಕೆಎಂ**

# ಕಬ್ಬನ್ ಉದ್ಯಾನವನದಲ್ಲಿ ವಿಶೇಷ ಕಾರ್ಯಕ್ರಮಗಳು

**ಬೆಂಗಳೂರು, ಜುಲೈ 10 (ಕರ್ನಾಟಕ ವಾರ್ತೆ)**

ಶ್ರೀ ಚಾಮರಾಜೇಂದ್ರ (ಕಬ್ಬನ್) ಉದ್ಯಾನವನದ ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ತೋಟಗಾರಿಕೆ ಮತ್ತು ಕೃಷಿ ಮಾರುಕಟ್ಟೆ ಸಚಿವರ ಸಲಹೆಯಂತೆ ಪ್ರತಿ ಭಾನುವಾರಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಅದರಂತೆ ದಿನಾಂಕ 12-7-2015 ರ ಭಾನುವಾರದಂದು ಕಬ್ಬನ್ ಉದ್ಯಾನವನದ ಬ್ಯಾಂಡ್ ಸ್ಟ್ಯಾಂಡ್ ಆವರಣ, ಬ್ಯಾಂಡ್ ಸ್ಟ್ಯಾಂಡ್ ಆವರಣದ ಮುಂಭಾಗದ ರಸ್ತೆಯಲ್ಲಿ ಕೆಎಸ್ಎಲ್‌ಟಿಎ ಸ್ಟೇಡಿಯಂನ ಹಿಂಭಾಗದ ರಸ್ತೆ) ಈ ಕೆಳಕಂಡ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಬೆಳಿಗ್ಗೆ 6-00 ಗಂಟೆಯಿಂದ 7-00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಉದಯರಾಗ" ಸಂಗೀತ ಕಾರ್ಯಕ್ರಮವನ್ನು ಬೆಳಿಗ್ಗೆ 8 ಗಂಟೆಯಿಂದ 9 ಗಂಟೆಯವರೆಗೆ ಕರ್ನಾಟಕ ರಾಜ್ಯ ಮೀಸಲು ಪೊಲೀಸ್ ಇಲಾಖೆ 3ನೇ ಪಡೆಯ ಬ್ಯಾಂಡ್ ಕಲಾವಿದರಿಂದ ಆಕರ್ಷಕ "ಪೊಲೀಸ್ ಬ್ಯಾಂಡ್" ಸಂಗೀತ ಕಾರ್ಯಕ್ರಮವನ್ನು ಹಾಗೂ ಸಂಜೆ 5 ಗಂಟೆಯಿಂದ 6 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ "ಉದ್ಯಾನವನದಲ್ಲಿ ಸಂಧ್ಯಾರಾಗ" ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಹಾಗೆಯೇ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯದ ಸಹಯೋಗದೊಂದಿಗೆ ಬಾಡಿಗೆ ರಹಿತ ಸೈಕಲ್ ಸವಾರಿ ವ್ಯವಸ್ಥೆಯ ಜೊತೆಗೆ ಉದ್ಯಾನವನದ ಆವರಣದಲ್ಲಿ ಜೈವಿಕ್ ಕೃಷಿಕ್ ಸೊಸೈಟಿ (ರಿ) ಲಾಲ್‌ಬಾಗ್ ವತಿಯಿಂದ ಸಾವಯವ ಪದ್ಧತಿಯಲ್ಲಿ ಬೆಳೆದ ಹಣ್ಣುಗಳಾದ ಮಾವು, ಪಪ್ಪಾಯ, ಏಲಕ್ಕಿ ಬಾಳೆ, ಮೂಸುಂಬಿ, ನೇರಳೆ (ಜಾಮೂನು) ಹಣ್ಣುಗಳ ಮಾರಾಟ, ಸಾವಯವ ಮಾವು, ಸೇಬು ಮತ್ತು ಸೀಬೆ ಹಣ್ಣಿನ ಜ್ಯೂಸ್, ಸಾವಯವ ಸೀಬೆ, ಮಾವಿನ ಹಣ್ಣಿನ ಫ್ರೂಟ್‌ಬಾರ್‌ಗಳು, ಸಾವಯವ ಹಲಸಿನ ಹಣ್ಣಿನ ಚಿಪ್ಸ್ ಮತ್ತು ಇತರೆ ಸಾವಯವ ಆಹಾರ ಪದಾರ್ಥಗಳ ಮಾರಾಟವನ್ನು ಹಾಗೂ ದಿ ನರ್ಸರಿಮೆನ್ ಕೋ-ಆಪರೇಟೀವ್ ಸೊಸೈಟಿ, ಲಾಲ್‌ಬಾಗ್, ಇವರ ವತಿಯಿಂದ ವಿವಿಧ ಅಲಂಕಾರಿಕ ಗಿಡಗಳು ಮತ್ತು ಉದ್ಯಾನವನ ಸಲಕರಣೆ ಮಾರಾಟ ಮತ್ತು ಮನೆಗಳಿಗೆ ಅಗತ್ಯವಿರುವ ಗಿಡಗಳ ಮಾರಾಟಕ್ಕೆ ಅವಕಾಶವನ್ನು ಕಲ್ಪಿಸಲಾಗಿದೆ.

ಗ್ರಂಥಾಲಯ ಇಲಾಖೆ, ಬೆಂಗಳೂರುರವರ ವತಿಯಿಂದ ನಗರ ಕೇಂದ್ರ ಗ್ರಂಥಾಲಯ ಮತ್ತು ಇಂದಿರಾ ಪ್ರಿಯದರ್ಶಿನಿ ಮಕ್ಕಳ ಗ್ರಂಥಾಲಯದ ಆವರಣದಲ್ಲಿ ಪುಸ್ತಕಗಳ ಪ್ರದರ್ಶನವನ್ನು ಏರ್ಪಡಿಸಲಾಗಿದೆ.

ಈ ಭಾನುವಾರ (ಜುಲೈ 12) ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ ಬೆಳಿಗ್ಗೆ 7.00 ಗಂಟೆಯಿಂದ ತಾರಸಿ ಕೈತೋಟ (Terrace Garden and Kitchen Garden) ಮತ್ತು ಅಣಬೆ ಬೇಸಾಯದ ಬಗ್ಗೆ ತೋಟಗಾರಿಕೆ ಉಪ ನಿರ್ದೇಶಕರು, ಬೆಂಗಳೂರು ನಗರ ಹಾಗೂ ಜೈವಿಕ ಕೇಂದ್ರ, ಹುಳಿಮಾವು ಅವರಿಂದ ಪ್ರಾತ್ಯಕ್ಷಿಕೆ ಮತ್ತು ತರಬೇತಿಯನ್ನು ನೀಡಲಾಗುವುದು.. ಕುಂಡಗಳಲ್ಲಿ ಬೆಳೆಸಿರುವ ವಿವಿಧ ಬಗೆಯ ತರಕಾರಿ ಗಿಡಗಳ ಪ್ರದರ್ಶನ. ಕೈತೋಟಗಳಲ್ಲಿ ಉಪಯೋಗಿಸುವ ವಿವಿಧ ಬಗೆಯ ಸಲಕರಣೆಗಳ ಪ್ರದರ್ಶನ ಮತ್ತು ಮಾರಾಟ. ಔಷಧಿ ಗಿಡಗಳು ಹಾಗೂ ಅಂಗಾಂಶ ಕೃಷಿ ಬಾಳೆ ಗಿಡಗಳ ಪ್ರದರ್ಶನ ಮತ್ತು ಮಾರಾಟ. ಅಣಬೆ ಬೇಸಾಯದ ವಿವಿಧ ಹಂತ ಹಾಗೂ ಮಾದರಿಗಳ ಪ್ರದರ್ಶನ.

ಬಾಬು:ಜಿಪಿಆರ್.

# ಆಫ್‌ಲೈನ್ ಪ್ರವೇಶ

**ಬೆಂಗಳೂರು, ಜುಲೈ 10 (ಕರ್ನಾಟಕ ವಾರ್ತೆ)**

ಬೆಂಗಳೂರು ಎಸ್.ಜೆ. ಸರ್ಕಾರಿ ಪಾಲಿಟೆಕ್ನಿಕ್ ನಲ್ಲಿ 2015-16ನೇ ಸಾಲಿನ ಐ.ಟಿ.ಐ. ವಿದ್ಯಾರ್ಥಿಗಳಿಗೆ 2ನೇ ಹಾಗೂ 3ನೇ ಸೆಮಿಸ್ಟರ್ ಡಿಪ್ಲೊಮೊ ಪ್ರವೇಶಕ್ಕೆ ಲ್ಯಾಟರಲ್ ಎಂಟ್ರಿ ಸ್ಕೀಂ ಮುಖಾಂತರ ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್‌ಗಳಿಗೆ ಆಫ್‌ಲೈನ್ ಮೂಲಕ ಪ್ರವೇಶ ನೀಡಲು ಜುಲೈ 13 ರಿಂದ 15 ರವರೆಗೆ ಪ್ರವೇಶ ಪ್ರಕ್ರಿಯೆ ನಡೆಯಲಿದೆ.

ಬಾಬು:ಜಿಪಿಆರ್.

## ಫಲಿತಾಂಶ

ಬೆಂಗಳೂರು, ಜುಲೈ 10 (ಕರ್ನಾಟಕ ವಾರ್ತೆ)

2015ರ ಏಪ್ರಿಲ್/ಮೇ ತಿಂಗಳಲ್ಲಿ ನಡೆದ ತಾಂತ್ರಿಕ ಪರೀಕ್ಷಾ ಮಂಡಳಿಯ ಡಿಪ್ಲೋಮಾ ಪರೀಕ್ಷೆಗಳ ಫಲಿತಾಂಶಗಳನ್ನು ದಿನಾಂಕ 13-07-2015 ರಂದು ಸೋಮವಾರ ರಾಜ್ಯದಲ್ಲಿನ ಎಲ್ಲಾ ಪಾಲಿಟೆಕ್ನಿಕ್‌ಗಳಲ್ಲಿ ಅಪರಾಹ್ನ 3-00 ಗಂಟೆಗೆ ಪ್ರಕಟಿಸಲಾಗುವುದು. ಇದಲ್ಲದೆ ಪರೀಕ್ಷಾ ಫಲಿತಾಂಶವು ವೆಬ್‌ಸೈಟ್ **www.btekarlinx.net** ವಿಳಾಸದಲ್ಲಿ ಲಭ್ಯವಿರುತ್ತದೆ.

ಬಾಬು:ಜಿಪಿಆರ್.

## ತರಬೇತಿ ಕಾರ್ಯಕ್ರಮ

ಬೆಂಗಳೂರು, ಜುಲೈ 10 (ಕರ್ನಾಟಕ ವಾರ್ತೆ)

ರಾಜ್ಯ ಜಾನುವಾರು ಸಂವರ್ಧನಾ ಮತ್ತು ತರಬೇತಿ ಕೇಂದ್ರ (ಇಂಡೋ-ಡ್ಯಾನಿಷ್ ಫಾರಂ) ಹೆಸರಘಟ್ಟ, ಬೆಂಗಲೂರು - 88 ರಲ್ಲಿ ಜುಲೈ 20 ರಿಂದ 27 ರವರೆಗೆ ಬೆಳಿಗ್ಗೆ 10-00 ರಿಂದ ಸಂಜೆ 4-30 ಗಂಟೆವರೆಗೆ ಹೈನುಗಾರಿಕೆ ಪ್ರಾರಂಭಿಸಲು ಆಸಕ್ತಿಯುಳ್ಳ ರೈತರಿಗೆ, ರೈತ ಮಕ್ಕಳಿಗೆ ಹಾಗೂ ರೈತ ಮಹಿಳೆಯರಿಗೆ 6 ದಿನಗಳ "ಹೈನುಗಾರಿಕೆ ಹಾಗೂ ಮೇವು ಉತ್ಪಾದನೆ" ಬಗ್ಗೆ ತರಬೇತಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಈ ತರಬೇತಿ ಅವಧಿಯಲ್ಲಿ ಊಟ ಮತ್ತು ಪ್ರಯಾಣದ ವೆಚ್ಚವನ್ನು ಅಭ್ಯರ್ಥಿಗಳೇ ಭರಿಸತಕ್ಕದ್ದು. ತರಬೇತಿ ಅವಧಿಯಲ್ಲಿ ವಿದ್ಯಾರ್ಥಿ ನಿಲಯದಲ್ಲಿ ಉಳಿದುಕೊಳ್ಳಲು ಇಚ್ಛಿಸಿದರೆ ಒಂದು ದಿನಕ್ಕೆ ರೂ 25-00 ರಂತೆ ವಸತಿ ಶುಲ್ಕ ಪಾವತಿಸಬೇಕಾಗಿದೆ.

ತರಬೇತಿ ಪಡೆಯಲು ಇಚ್ಛಿಸುವವರು ವಾಸಸ್ಥಳದ ಯಾವುದಾದರೊಂದು ದೃಢಿಕರಣದ ಪ್ರತಿ ಹಾಗೂ ಇತ್ತೀಚಿನ 2 ಪಾಸ್‌ಪೋರ್ಟ್ ಅಳತೆಯ ಭಾವಚಿತ್ರಗಳೊಂದಿಗೆ ಜುಲೈ 20 ರಂದು ಬೆಳಿಗ್ಗೆ 9-30 ಗಂಟೆಗೆ ನೇರವಾಗಿ ತರಬೇತಿಗೆ ಹಾಜರಾಗಬಹುದು.

ಹೆಚ್ಚಿನ ಮಾಹಿತಿಗಾಗಿ ಕಚೇರಿ ವೇಳೆಯಲ್ಲಿ ಉಪ ನಿರ್ದೇಶಕರು (ತರಬೇತಿ), ಇವರನ್ನು ನೇರವಾಗಿ ಅಥವಾ ದೂರವಾಣಿ ಮುಖೇನ ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ. ದೂರವಾಣಿ ಸಂಖ್ಯೆ 080-28466397.

ಬಾಬು:ಜಿಪಿಆರ್.

## ಲಾಲ್‌ಬಾಗ್‌ನಲ್ಲಿ ಭಾನುವಾರ ಪೊಲೀಸ್ ಬ್ಯಾಂಡ್

ಬೆಂಗಳೂರು, ಜುಲೈ 10 (ಕರ್ನಾಟಕ ವಾರ್ತೆ)

ಲಾಲ್‌ಬಾಗ್ ಸಸ್ಯತೋಟದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದಂದು ವಿವಿಧ ಕಾರ್ಯಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.

ದಿನಾಂಕ 12-7-2015 ಭಾನುವಾರದಂದು ಬೆಳಿಗ್ಗೆ 7-00 ಗಂಟೆಯಿಂದ 9-00 ಗಂಟೆಯವರೆಗೆ ಎಮ್.ವಿ.ಜಿ. ಪೊಲೀಸ್ ಬ್ಯಾಂಡ್ ವತಿಯಿಂದ ಸಸ್ಯತೋಟದ ಗಾಜಿನಮನೆ ಆವರಣದಲ್ಲಿ ಆಕರ್ಷಕ "ಪೊಲೀಸ್

ಬ್ಯಾಂಡ್" ಸಂಗೀತ ಕಾರ್ಯಕ್ರಮ ಹಾಗೂ ಮಿಲಿಟರಿಯ ವಿವಿಧ ಸುಧಾರಿತ ಶಸ್ತ್ರಾಸ್ತ್ರಗಳ ವಿಶೇಷ ಪ್ರದರ್ಶನ ಏರ್ಪಡಿಸಲಾಗಿದೆ.

ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಕಾರ್ಯಕ್ರಮವನ್ನು ವೀಕ್ಷಿಸಲು ಕೋರಿದೆ.

ಬಾಬು:ಜಿಪಿಆರ್.

## ಚಂದನ ವಾಹಿನಿ: ದೇಜಗೌ ಸಾಕ್ಷ್ಯಚಿತ್ರ

**ಬೆಂಗಳೂರು, ಜುಲೈ 10 (ಕರ್ನಾಟಕ ವಾರ್ತೆ)**

ಬೆಂಗಳೂರು ದೂರದರ್ಶನದ ಚಂದನ ವಾಹಿನಿಯಲ್ಲಿ ಜುಲೈ 12 ರಂದು ರಾತ್ರಿ 7-00 ಗಂಟೆಗೆ ಹಿರಿಯ ಸಾಹಿತಿ ಶ್ರೀ ದೇ. ಜವರೇಗೌಡ ಅವರ ಜನ್ಮದಿನಾಚರಣೆ ನಿಮಿತ್ತ ಸಾಕ್ಷ್ಯಚಿತ್ರ ಪ್ರಸಾರವಾಗಲಿದೆ.

ಬಾಬು/ಕೆಎಂ